**23.01.2025**

**ಆಕಾಶವಾಣಿ–ಪ್ರದೇಶ ಸಮಾಚಾರ**

**ಓದುತ್ತಿರುವವರು–ಶ್ರೀಧರ ಹೆಗಡೆ ಭದ್ರನ್**

**ಮುಖ್ಯಾಂಶಗಳು;**

- **'ಬೇಟಿ ಬಚಾವೋ ಬೇಟಿ ಫಡಾವೋ' ಅಭಿಯಾನಕ್ಕೆ 10 ವರ್ಷ; ವಿಧಾಯಕ ಕಾರ್ಯಕ್ರಮಗಳು.**

- **ಕೃಷಿ ಸುದೃಢವಾಗಿದ್ದರೆ ದೇಶ ಸುದೃಢವಾಗಿರುತ್ತದೆ– ರಾಜ್ಯಪಾಲರು**

- **ಬೇಸಿಗೆಯಲ್ಲಿ ಲೋಡ ಶೆಡ್ಡಿಂಗ್ ಮಾಡುವುದಿಲ್ಲ– ಸಚಿವ ಕೆ. ಜೆ. ಜಾರ್ಜ.**

- **ಬೆಂಗಳೂರಿನ ಅರಮನೆ ಮೈದಾನದಲ್ಲಿ ಇಂದಿನಿಂದ 25ರ ವರೆಗೆ 'ಸಾವಯವ ಮತ್ತು ಸಿರಿಧಾನ್ಯ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ 2025.**

**'ಬೇಟಿ ಬಚಾವೋ ಬೇಟಿ ಫಡಾವೋ' ಅಭಿಯಾನದ 10 ವರ್ಷಗಳನ್ನು ಆಚರಿಸುತ್ತಿದ್ದೇವೆ. ಕಳೆದ ದಶಕದಲ್ಲಿ, ಇದು ಎಲ್ಲಾ ಹಂತಗಳ ಜನರನ್ನು ತೊಡಗಿಸಿಕೊಳ್ಳುವ, ಪರಿವರ್ತನಾತ್ಮಕ ಮತ್ತು ಸಾಮೂಹಿಕ ಅಭಿಯಾನವಾಗಿ ಮಾರ್ಪಟ್ಟಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಜನರು ಮತ್ತು ವಿವಿಧ ಸಾಮಾಜಿಕ ಸೇವಾ ಸಂಸ್ಥೆಗಳ ಪ್ರಯತ್ನದಿಂದಾಗಿ, 'ಬೇಟಿ ಬಚಾವೋ ಬೇಟಿ ಫಡಾವೋ' ಮಹತ್ವದ ಮೈಲಿಗಲ್ಲುಗಳನ್ನು ಸಾಧಿಸಿದೆ. ಐತಿಹಾಸಿಕವಾಗಿ ಕಡಿಮೆ ಮಕ್ಕಳ ಲಿಂಗ ಅನುಪಾತ ಹೊಂದಿರುವ ಜಿಲ್ಲೆಗಳಲ್ಲಿ ಗಮನಾರ್ಹ ಸುಧಾರಣೆಗಳು ಕಂಡುಬಂದಿವೆ ಮತ್ತು ಜಾಗೃತಿ ಅಭಿಯಾನಗಳು ಲಿಂಗ ಸಮಾನತೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸಿವೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಹೇಳಿದ್ದಾರೆ.**

<><><>

**"ಬೇಟಿ ಬಚಾವೋ, ಬೇಟಿ ಪಡಾವೋ ಕಾರ್ಯಕ್ರಮ ಜಾರಿಗೆ ಬಂದು ಹತ್ತು ವರ್ಷಗಳಾದ ಹಿನ್ನಲೆ ಬಳ್ಳಾರಿಯಲ್ಲಿ ಶಾಲಾ ಮಕ್ಕಳಿಂದ "ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆ, ಭದ್ರತೆ ಮತ್ತು ಸಬಲೀಕರಣಕ್ಕಾಗಿ" ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿತ್ತು. ಬಳ್ಳಾರಿ ಜಿಲ್ಲಾ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶ ರಾಜೇಶ್ ಹೊಸಮನಿ ಅವರು ಚಾಲನೆ ನೀಡಿ; ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮದಿಂದಾಗಿ ಶಾಲೆಗಳಲ್ಲಿ ಕಲಿಯುವ ಹೆಣ್ಣು ಮಕ್ಕಳ ಸಂಖ್ಯೆ ಹೆಚ್ಚಿದೆ. ಇನ್ನು ಲಿಂಗಾನುಪಾತವೂ ಹೆಚ್ಚಿದೆ ಎಂದರು.**

<><><>

**ವಿಜಯಪುರದಲ್ಲಿ ವಿನೂತನವಾಗಿ ದಶಮಾನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಧಿಕಾರಿ ಟಿ.ಭೂಬಾಲನ್ ಹಸಿರು ನಿಶಾನೆ ತೋರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಬೈಕ್ ರ್‍ಯಾಲಿ ಮೂಲಕ ನಗರದ ಪ್ರಮುಖ ರಸ್ತೆಗಳಲ್ಲಿ ಜಾಗೃತಿ ಮೂಡಿಸಿದರು.**

<><><>

'ಬೇಟಿ ಬಚಾವ್ರೋ ಬೇಟಿ ಪಡಾವ್ರೋ' ಅಭಿಯಾನದ 10ನೇ ವಾರ್ಷಿಕೋತ್ಸವದ ಸಂಭ್ರಮಾಚರಣೆ ಅಂತಾರಾಷ್ಟ್ರೀಯ ಮಹಿಳಾ ದಿನವಾದ ಮಾರ್ಚ್ 8ರವರೆಗೆ ನಡೆಯಲಿದೆ.

<><><>

ನಮ್ಮದು ಕೃಷಿ ಪ್ರಧಾನ ದೇಶ. ಕೃಷಿ ಸುದೃಢವಾಗಿದ್ದರೆ ದೇಶ ಸುದೃಢವಾಗಿರುತ್ತದೆ. ಕೃಷಿ ಮತ್ತು ತೋಟಗಾರಿಕೆ ಪದವೀಧರರು, ವಿದ್ಯಾರ್ಥಿಗಳು ರೈತರಿಗೆ ಲಾಭದಾಯಕವಾದ, ಪರಿಸರಕ್ಕೆ ಪೂರಕವಾದ ಕೃಷಿ ಸಂಶೋಧನೆಗಳನ್ನು ಕೈಗೊಂಡು ಕೊಡುಗೆ ನೀಡಬೇಕೆಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ವಿದ್ಯಾರ್ಥಿಗಳಿಗೆ ಕರೆ ನೀಡಿದ್ದಾರೆ. ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ ವಿಶ್ವವಿದ್ಯಾಲಯದ 9ನೇ ಘಟಿಕೋತ್ಸವ ಸುಗ್ಗಿ ಸಂಭ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೃಷಿ ಮತ್ತು ತೋಟಗಾರಿಕೆ ಕ್ಷೇತ್ರ ದೇಶದ ಬೆನ್ನೆಲುಬಾಗಿದ್ದು, ಈ ಶಿಕ್ಷಣ ಪಡೆದ ವಿದ್ಯಾರ್ಥಿಗಳು ತಮ್ಮ ಜ್ಞಾನದಿಂದ ಎತ್ತರಕ್ಕೆ ಬೆಳೆಯಬೇಕು. ಹೆಚ್ಚುತ್ತಿರುವ ಜನಸಂಖ್ಯೆ, ನೈಸರ್ಗಿಕ ಸಂಪನ್ಮೂಲಗಳ ಕೊರತೆ ಹಿನ್ನೆಲೆಯಲ್ಲಿ ನಿಮ್ಮ ಪಾತ್ರ ದೊಡ್ಡದಿದೆ. ಕೌಶಲ್ಯ ಮತ್ತು ತಂತ್ರಜ್ಞಾನವನ್ನು ಸಮರ್ಪಕವಾಗಿ ಅಳವಡಿಸಿಕೊಂಡು ಹೊಸ ಹೊಸ ಸಂಶೋಧನೆ ಮಾಡುವ ಜವಾಬ್ದಾರಿ ನಿಮ್ಮ ಮೇಲಿದೆ. ಕೃಷಿ ಕ್ಷೇತ್ರದಲ್ಲಿ ನವೀನ ತಂತ್ರಜ್ಞಾನ, ಸ್ಮಾರ್ಟ್ ಅಗ್ರಿಕಲ್ಚರ್ ಕಡೆ ಗಮನ ಹರಿಸಬೇಕಿದೆ ಎಂದರು.

<><><>

ಕುವೆಂಪು ವಿಶ್ವವಿದ್ಯಾಲಯದ ಘಟಿಕೋಟ್ಸವದಲ್ಲಿ ಮಾತನಾಡಿದ ರಾಜ್ಯಪಾಲರು; ಆಧುನಿಕ ತಂತ್ರಜ್ಞಾನ, ನಾವೀನ್ಯತೆ ಮತ್ತು ಸುಸ್ಥಿರತೆಯ ಯುಗದಲ್ಲಿ ಜೀವಿಸುತ್ತಿರುವ ಪ್ರತಿಭಾವಂತ ಶಿಕ್ಷಿತ ಯುವಪೀಳಿಗೆಯ ಕೊಡುಗೆಯು ಮಾನವಕುಲಕ್ಕೆ ಹೊಸ ದಿಕ್ಕನ್ನು ನೀಡಲಿವೆ ಎಂದು ಹೇಳಿದರು. ವಿದ್ಯಾರ್ಥಿಗಳು ತಾವು ವಿಶ್ವವಿದ್ಯಾಲಯದಿಂದ ಗಳಿಸಿದ ಜ್ಞಾನವನ್ನು ತಮ್ಮ ವೈಯಕ್ತಿಕ ಬೆಳವಣಿಗೆಗೆ ಮಾತ್ರವಲ್ಲದೆ, ಸಮಾಜ, ದೇಶ ಮತ್ತು ಪರಿಸರದ ಒಳಿತಿಗಾಗಿ ಬಳಸಿಕೊಳ್ಳುವಂತೆ ಕಿವಿಮಾತು ಹೇಳಿದರು.

<><><>

ರಾಜ್ಯದಲ್ಲಿ ಮೈಕ್ರೋಫೈನಾನ್ಸ್‌ಗಳಿಗೆ ಕಡಿವಾಣ ಹಾಕಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಸಿದ್ದಗಂಗಾ ಮಠಕ್ಕೆ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಕ್ರೋ ಫೈನಾನ್ಸ್‌ಗಳು ಸರ್ಕಾರದ ಮಾರ್ಗದರ್ಶನಗಳನ್ನು ಉಲ್ಲಂಘನೆ ಮಾಡುತ್ತಿದ್ದು, ಅಂತಹವರ ವಿರುದ್ಧ ಕಠಿಣಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ಮೈಕ್ರೋ ಫೈನಾನ್ಸ್ ನಿಂದ ಕಿರುಕುಳ ಅನುಭವಿಸುತ್ತಿರುವವರು ಪೊಲೀಸ್ ಠಾಣೆಗೆ ದೂರು ನೀಡುವಂತೆ ತಿಳಿಸಿದ್ದಾರೆ.

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ಬೇಸಿಗೆಯಲ್ಲಿ ಲೋಡ ಶೆಡ್ಡಿಂಗ್ ಇಲ್ಲ, ತೋಟದಲ್ಲಿರುವ ಮನೆಗಳಿಗೂ ಸಹ ನಿರಂತರ ಜ್ಯೋತಿ ಸಂಪರ್ಕ ಕಲ್ಪಿಸಲು ಸರಕಾರದ ಮಟ್ಟದಲ್ಲಿ ಚರ್ಚಿಸಲಾಗುವುದೆಂದು ಇಂಧನ ಖಾತೆ ಸಚಿವ ಕೆ. ಜೆ. ಜಾರ್ಜ ಹೇಳಿದ್ದಾರೆ. ಬಾಗಲಕೋಟೆಯಲ್ಲಿ ನಡೆದ ಇಂಧನ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು; ಈ ಭಾಗದಲ್ಲಿ ಕೃ ಷ್ಣಾ ಮೇಲ್ದಂಡೆ ಯೋಜನೆಯಿಂದ ಮುಳುಗಡೆಗೊಂಡ ಸಂತ್ರಸ್ತರು ತಮ್ಮ ತಮ್ಮ ತೋಟಗಳಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿದ್ದಾರೆ. ಆ ಮನೆಗಳಿಗೂ ಸಹ ನಿರಂತರ ಜ್ಯೋತಿ ಮೂಲಕ ವಿದ್ಯುತ್ ಸಂಪರ್ಕ ಅಗತ್ಯವಿದ್ದು, ಈ ಬಗ್ಗೆ ಸರಕಾರದ ಮಟ್ಟದಲ್ಲಿ ಚರ್ಚಿಸಿ ಕ್ರಮವಹಿಸಲಾಗುವುದೆಂದು ತಿಳಿಸಿದರು.

<><><>

ಬೆಂಗಳೂರಿನ ಅರಮನೆ ಮೈದಾನದಲ್ಲಿ ಇಂದಿನಿಂದ 25ರ ವರೆಗೆ 'ಸಾವಯವ ಮತ್ತು ಸಿರಿಧಾನ್ಯ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ 2025' ಅನ್ನು ಹಮ್ಮಿಕೊಳ್ಳಲಾಗಿದೆ. ಮೂರು ದಿನ ನಡೆಯುವ ಈ ಮೇಳದಲ್ಲಿ 300ಕ್ಕೂ ಹೆಚ್ಚು ಮಳಿಗೆಗಳನ್ನು ತೆರೆಯಲಾಗುವುದು. 30ಕ್ಕೂ ಹೆಚ್ಚು ಅಂತಾರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದ ತಜ್ಞರು ಸಿರಿಧಾನ್ಯ ಮತ್ತು ಸಾವಯವ ಉತ್ಪನ್ನಗಳ ಕುರಿತು ಮಾಹಿತಿ ಹಂಚಿಕೊಳ್ಳಲಿದ್ದಾರೆ ಎಂದು ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ.

<><><>

ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನ ಅರಬೈಲ್ ಘಟ್ಟದ ಬಳಿ ತರಕಾರಿ ತುಂಬಿದ್ದ ಲಾರಿ ಅಪಘಾತದಲ್ಲಿ 10 ಜನರಿಗೆ ಗಂಭೀರ ಗಾಯಗಳಾಗಿದ್ದು, ಅವರಿಗೆ ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಚಿಕಿತ್ಸೆ ಮುಂದುವರೆದಿದೆ. ಗಾಯಾಳುಗಳಿಗೆ ಎಕ್ಸ್ ರೇ, ಸಿಟಿಸ್ಕ್ಯಾನ್ ಮಾಡಲಾಗಿದೆ. ಗಾಯಾಳುಗಳಿಗೆ ತಲೆಗೆ, ಹೊಟ್ಟೆಗೆ ಗಾಯ, ಮೂಳೆಗಳಿಗೆ ಪೆಟ್ಟು ಬಿದ್ದಿದೆ. ಗಾಯಾಳುಗಳಿಗೆ ಚಿಕಿತ್ಸೆ ಮುಂದುವರೆದಿದ್ದು, ಅಪಾಯದಿಂದ ಪಾರಾಗಿದ್ದಾರೆ ಎಂದು ಕರ್ನಾಟಕ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಹುಬ್ಬಳ್ಳಿ ನಿರ್ದೇಶಕ ಡಾ. ಎಸ್. ಎಫ್. ಕಮ್ಮಾರ್ ಆಕಾಶವಾಣಿಗೆ ತಿಳಿಸಿದ್ದಾರೆ.

<><><>

ಯಲ್ಲಾಪುರ ತಾಲ್ಲೂಕಿನ ಅರಬೈಲ್ ಸಮೀಪ ನಿನ್ನೆ ಸಂಭವಿಸಿದ ಅಪಘಾತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ರಾಜ್ಯ ಸರ್ಕಾರದಿಂದ ತಲಾ 3 ಲಕ್ಷ ಪರಿಹಾರ ಘೋಷಿಸಲಾಗಿದೆ. ರಾಜ್ಯ ಸರ್ಕಾರದ ಆದೇಶದ ಮೇರೆಗೆ ಜಿಲ್ಲಾಧಿಕಾರಿ ಕೆ. ಲಕ್ಷ್ಮಿಪ್ರಿಯಾ ಅವರು ಮೃತರ ಕುಟುಂಬ ಸದಸ್ಯರಿಗೆ ಪರಿಹಾರ ಮೊತ್ತ ಬಿಡುಗಡೆಯ ಆದೇಶ ಪ್ರತಿ ನೀಡಿದರು. ಯಲ್ಲಾಪುರ ಶಾಸಕ ಶಿವರಾಮ ಹೆಬ್ಬಾರ, ಸವಣೂರು ಶಾಸಕ ಯಾಸಿರ್ ಖಾನ್ ಪಠಾಣ ಆದೇಶ ಪ್ರತಿಯನ್ನು ಕುಟುಂಬ ಸದಸ್ಯರಿಗೆ ಹಸ್ತಾಂತರಿಸಿದರು.

<><><>

ಈ ಮಧ್ಯೆ: ಅರಬೈಲ್ ಬಳಿ ಲಾರಿ ದುರಂತದಲ್ಲಿ ಸಾವನ್ನಪ್ಪಿದವರ ಕುಟುಂಬಕ್ಕೆ ಕೇಂದ್ರ ಸರ್ಕಾರ ತಲಾ 2 ಲಕ್ಷ ಹಾಗೂ ಗಾಯಾಳುಗಳಿಗೆ 50 ಸಾವಿರ ಪರಿಹಾರ ಘೋ ‘ಣೆ ಮಾಡಿದೆ. ಈ ಬಗ್ಗೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ, ಈ ದುರಂತದ ವಿದ್ಯಮಾನ ತಿಳಿಯುತ್ತಿದ್ದಂತೆಯೇ ಕೇಂದ್ರ ಸರ್ಕಾರ ಸಂತ್ರಸ್ಥರ ನೆರವಿಗೆ ತಕ್ಷಣ ಧಾವಿಸಿದೆ ಎಂದರು.

<><><>

ಯಾವುದೇ ಗ್ರಾಮದಿಂದ ರಾತ್ರಿ ವೇಳೆಯಲ್ಲಿ ತುರ್ತು ಚಿಕಿತ್ಸೆ ಕೋರಿ ಬರುವ ಬಾಣಂತಿಯರಿಗೆ ವೈದ್ಯರು ಮತ್ತು ಆಸ್ಪತ್ರೆಯಲ್ಲಿನ ಸಿಬ್ಬಂದಿ ತಕ್ಷಣವೇ ಸ್ಪಂದನೆ ನೀಡಬೇಕು. ಬೇರೆಡೆ ಕಳುಹಿಸಬಾರದು. ಪ್ರಥಮ ಹಂತದ ಚಿಕಿತ್ಸೆಗೆ ಕ್ರಮವಹಿಸಿ, ಹೆಚ್ಚಿನ ಚಿಕಿತ್ಸೆಯ ಅವಶ್ಯವಿದ್ದರೆ ಮಾತ್ರ ಬೇರೆಡೆ ಕಳುಹಿಸಲು ಕ್ರಮವಹಿಸಬೇಕು ಎಂದು ಆರೋಗ್ಯ ಸಚಿವ ದಿನೇಶ ಗುಂಡೂರಾವ್ ಸೂಚಿಸಿದ್ದಾರೆ. ರಾಯಚೂರು ಜಿಲ್ಲೆಯ ಪ್ರವಾಸದಲ್ಲಿರುವ ಅವರು ಮಾನ್ವಿ ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿ, ಆಸ್ಪತ್ರೆಯಲ್ಲಿರುವ ಸೌಲಭ್ಯಗಳ ಬಗ್ಗೆ ಪರಿಶೀಲನೆ ನಡೆಸಿದರು. ಇದೇ ವೇಳೆ ಸಚಿವರು, ಆಸ್ಪತ್ರೆಯ ವಾರ್ಡ್‌ಗಳಿಗೆ ಸಂಚರಿಸಿ ಬಾಣಂತಿಯರ ಆರೋಗ್ಯ ವಿಚಾರಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು; ಮಾನ್ವಿ ಸೇರಿದಂತೆ ಕೆಲವು ಆಸ್ಪತ್ರೆಗಳಲ್ಲಿ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಯ ಕೊರತೆ ಇರುವುದು ಗಮನಕ್ಕೆ ಬಂದಿದೆ. ಶ್ರೀಘದಲ್ಲಿ ಭರ್ತಿಗೆ ಕ್ರಮ ವಹಿಸಲಾಗುವುದು. ಆಸ್ಪತ್ರೆಯಲ್ಲಿ ತುರ್ತ ಚಿಕಿತ್ಸೆಗೆ ಅನುಕೂಲವಾಗುವಂತೆ ಅವಶ್ಯಕತೆ ಇರುವ ಕಡೆಗಳಲ್ಲಿ ನಿಯಮಾನುಸಾರ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿ ಪಡೆಯಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

<><><>

ಸಂಕ್ಷಿಪ್ತ ಸುದ್ದಿ

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮಶತಮಾನೋತ್ಸವ ವ ’ಹಿನ್ನೆಲೆಯಲ್ಲಿ ಫೆಬ್ರವರಿ 15ರಿಂದ ಮಾರ್ಚ್ 15ರ ತನಕ ಜಿಲ್ಲಾಮಟ್ಟದಲ್ಲಿ 'ಅಟಲ್ ವಿರಾಸತ್' ಸಮ್ಮೇಳನ ಆಯೋಜಿಸಲು ಬಿಜೆಪಿ ನಿರ್ಧರಿಸಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಡಾಕ್ಟರ್ ಸಿ. ಎನ್. ಅಶ್ವತ್ಥನಾರಾಯಣ ತಿಳಿಸಿದ್ದಾರೆ.

ವರದಿ – ಡಿಡಿ ನ್ಯೂಸ್.

ಮಂಡ್ಯದಲ್ಲಿ ಕೃಷಿ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿರುವುದು ಹಾಗೂ ಸರ್ಕಾರಿ ಸ್ವಾಮ್ಯದ ಮೈಸೂರು ಸಕ್ಕರೆ ಕಾರ್ಖಾನೆ ಕಳೆದ 24 ವ ’ಗಳಿಂದ ಬಾಕಿ ಉಳಿಸಿಕೊಂಡಿದ್ದ ವಿದ್ಯುತ್ ಬಿಲ್ 52 ಕೋಟಿ ಮನ್ನಾ ಮಾಡಿರುವ ಹಿನ್ನೆಲೆ; ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ಅವರ ನೇತೃತ್ವದಲ್ಲಿ ಮಂಡ್ಯ ಜಿಲ್ಲೆಯ ಶಾಸಕರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಧನ್ಯವಾದ ತಿಳಿಸಿದರು.

ವರದಿ – ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಮಾಧ್ಯಮ ಎಕ್ಸ್

ಸಚಿವ ಸಂಪುಟದ ಅನುಮೋದನೆಯಂತೆ, ರಾಜ್ಯ ಸರ್ಕಾರವು ಗೆಜೆಟ್ ಅಧಿಸೂಚನೆ ಹೊರಡಿಸಿ ಪ್ರತ್ಯೇಕ ಧಾರವಾಡ ಮಹಾನಗರ ಪಾಲಿಕೆಯ ಆರಂಭಕ್ಕೆ ಮುಂದಾಗಿರುವುದು ಸ್ವಾಗತಾರ್ಹ ಎಂದು ವಿಧಾನಸಭೆ ಪ್ರತಿಪಕ್ಷ ಉಪನಾಯಕ ಅರವಿಂದ ಬೆಲ್ಲದ ಹೇಳಿದ್ದಾರೆ.

ವರದಿ – ಅರವಿಂದ ಬೆಲ್ಲದ ಸಾಮಾಜಿಕ ಮಾಧ್ಯಮ ಎಕ್ಸ್

ಶಿವಮೊಗ್ಗ ಜಿಲ್ಲೆಯ ಭದ್ರಾವತಿ ಆಕಾಶವಾಣಿ ಕೇಂದ್ರದ ಸಾಮರ್ಥ್ಯ ಹೆಚ್ಚಿಸಲು ಕೇಂದ್ರ ಸರ್ಕಾರ ಮುಂದಾಗಿದ್ದು, ಈಗ ಇರುವ ಮೀಡಿಯಂ ವೇವ್, ಫ್ರೀಕ್ವೆನ್ಸಿ ಮಾಡ್ಯುಲೇ ’ನ್ ಟ್ರಾನ್ಸ್ ಮಿ ’ನ್‌ಗೆ ಅಂದರೆ ಎಫ್.ಎಂಗೆ ಬದಲಾಗುತ್ತಿದೆ.

10 ಕೋಟಿ ವೆಚ್ಚದಲ್ಲಿ 10 ಕಿಲೋ ವ್ಯಾಟ್ ಸಾಮರ್ಥ್ಯದ ಟ್ರಾನ್ಸ್‌ಮೀಟರ್ ಅಳವಡಿಸಲಾಗುತ್ತಿದ್ದು, ಇಂದು ಕೇಂದ್ರದ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ: ಎಲ್ ಮುರುಗನ್ ಶಿವಮೊಗ್ಗ ದೂರದರ್ಶನ ಕೇಂದ್ರದಲ್ಲಿ ಟ್ರಾನ್ಸ್‌ಮೀಟರ್‌ಗೆ ಪೂಜೆ ಸಲ್ಲಿಸಲಿದ್ದಾರೆ. ಬಳಿಕ ಅವರು, ಶಿವಮೊಗ್ಗದಲ್ಲಿ ಸಂವಿಧಾನ್ ಗೌರವ್ ಅಭಿಯಾನದಲ್ಲಿ ಪಾಲ್ಗೊಳ್ಳಲಿದ್ದಾರೆ.

ಆರ್.ಎನ್.ಯು/ಬೆಂಗಳೂರು/ಭದ್ರಾವತಿ

ನಾಡು ಅಭಿವೃದ್ಧಿಯಾಗಬೇಕಾದರೆ, ಅಲ್ಲಿನ ಸಂಸ್ಕೃತಿ ಮತ್ತು ಸಾಹಿತ್ಯ ಕ್ಷೇತ್ರದ ಬೆಳವಣಿಗೆ ಅತ್ಯವಶ್ಯಕ ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದ್ದಾರೆ.

ಕೊಪ್ಪಳದಲ್ಲಿ ನಿನ್ನೆ ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು ಇವರ ವತಿಯಿಂದ ಆಯೋಜಿಸಲಾದ ಗೌರವ ಪ್ರಶಸ್ತಿ-2022, ಸಾಹಿತ್ಯಶ್ರೀ ಪ್ರಶಸ್ತಿ-2022 ಹಾಗೂ ಪುಸ್ತಕ ಬಹುಮಾನ-2021ರ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಗೌರವ ಪ್ರಶಸ್ತಿ ಸ್ವೀಕರಿಸಿದವರಲ್ಲಿ ಒಬ್ಬರಾದ ಪತ್ರಕರ್ತ ಹಾಗೂ ಲೇಖಕ ರಂಜಾನ್ ದರ್ಗಾ ಮಾತನಾಡಿ;

ಧ್ವನಿ: ರಂಜಾನ್ ದರ್ಗಾ